## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ
(ವಿಧಾನ ಸಭೆಯಿಂದ ಚುನಾಯಿತರಾದವರು )

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 921

ಉತ್ತರಿಸಬೇಕಾದ ದಿನಾಂಕ : 17-12-2024

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು 2018-19ನೇ ಸಾಲಿನಲ್ಲಿ ರೈತರು ಪ್ರಾಥಮಿಕ ಸಹಕಾರ ಸಂಘಗಳ ಮೂಲಕ ಪಡೆದಿರುವ ಬೆಳೆ ಸಾಲಗಳ ಪೈಕಿ ರೂ.1.00 ಲಕ್ಷ ಮನ್ನಾ ಮಾಡಲಾಗಿದ್ದು, ವಿವಿಧ ಕಾರಣಗಳಿಂದ ಹಲವಾರು ಸಹಕಾರ ಸಂಘಗಳಲ್ಲಿ ಕೆಲವೊಂದು ಅರ್ಹ ಬೆಳೆ ಸಾಲಗಾರ ರೈತರಿಗೆ ಸಾಲ ಮನ್ನಾ ಮೊತ್ತ ಇನ್ನೂ ಬಿಡುಗಡೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಸದರಿ ವಿಷಯದ ಕುರಿತು ಸಂಘದ ವಾರ್ಷಿಕ ಮಹಾಸಭೆಗಳಲ್ಲಿ ಸದಸ್ಯರು ಸಹಕಾರ ಸಂಘಗಳ ಆಡಳಿತ ಮಂಡಳಿಗಳನ್ನು ತರಾಟೆಗೆ ತೆಗೆದುಕೊಳ್ಳುತ್ತಿದ್ದು, ಈ ಸಾಲ ಮನ್ನಾ ಯೋಜನೆಯ ಬಾಕಿ ಉಳಿದ ರೈತರಿಗೆ ಬಾಕಿ ಮೊತ್ತ ಬಿಡುಗಡೆಯ ಬಗ್ಗೆ ಸರ್ಕಾರ ಇದುವರೆಗೆ ಯಾವ ಕ್ರಮ ಕೈಗೊಂಡಿದೆ; | ರಾಜ್ಯದ ಸಹಕಾರ ಸಂಘಗಳಲ್ಲಿನ ಹಸಿರು ಪಟ್ಟಿ ರೈತರ ಪೈಕಿ ಬಾಕಿ ಇರುವ 31,003 ರೈತರಿಗೆ ರೂ. 167.51 ಕೋಟಿಗಳನ್ನು ಮತ್ತು ಅರ್ಹತೆ ಗುರುತಿಸಲು ಬಾಕಿ ಇರುವ ರೈತರಿಗೆ ಸಂಬಂಧಿಸಿದಂತೆ ರೂ.64.49 ಕೋಟಿ ಒಟ್ಟಾರೆ ಅಂದಾಜು ರೂ.232 ಕೋಟಿಗಳಿಗೆ ಆಯವ್ಯಯ ಅವಕಾಶ ಕಲ್ಪಿಸಿ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| | | ಉಳಿದ 13,334 ರೈತರ ಅರ್ಹತೆ ಗುರುತಿಸಲು ಸಾಲ ಮನ್ನಾ ತಂತ್ರಾಂಶದಲ್ಲಿರುವ ನ್ಯೂನ್ಯತೆಗಳನ್ನು ಸರಿಪಡಿಸಿ ಅರ್ಹ ರೈತರ ಪಟ್ಟಿ ನೀಡಲು ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ರವರಿಗೆ ಪತ್ರ ಬರೆಯಲಾಗಿರುತ್ತದೆ. |
| ಇ) | ಯಾವ ಕಾಲಮಿತಿಯೊಳಗೆ ಕೆಲವೊಂದು ಅರ್ಹ ಬೆಳೆ ಸಾಲಗಾರ ರೈತರ ಇನ್ನೂ ಬಾಕಿ ಇರುವ ಸಾಲ ಮನ್ನಾ ಮೊತ್ತವನ್ನು ಬಿಡುಗಡೆ ಗೊಳಿಸಲಾಗುವುದು? | ಸರ್ಕಾರದಿಂದ ಅನುದಾನ ಬಿಡುಗಡೆಯಾದ ಕೂಡಲೇ ರೈತರ ಖಾತೆಗೆ ಸಾಲ ಮನ್ನಾ ಮೊತ್ತ ಜಮಾ ಮಾಡಲಾಗುವುದು. |

**ಸಂಖ್ಯೆ: ಸಿಒ 301 ಸಿಎಲ್‌ಎಸ್ 2024**

K. N. Rajanna

**(ಕೆ.ಎನ್.ರಾಜಣ್ಣ)**
**ಸಹಕಾರ ಸಚಿವರು**